ಕರ್ನಾಟಕ ಸರ್ಕಾರ

**ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.**

ಸಂಖ್ಯೆ:ಸಿ3[1]ಪ್ರಾ.ಶಿ: ಅ.ಶಿ. ನೇ.01/2023-24 ದಿನಾಂಕ 25.05.2023

**ಜ್ಞಾಪನಾ**

ವಿಷಯ:- 2023-24 ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ ಇಪಿ 166 ಎಸ್ಇಎಸ್ 2023 ದಿನಾಂಕ 25.05.2023

2. ಸರ್ಕಾರದ ಆದೇಶ ಸಂಖ್ಯೆ ಇಪಿ14 ಎಸ್ಇಎಸ್ 2022 ದಿನಾಂಕ 27.04.2022

3.ಸರ್ಕಾರದ ಆದೇಶ ಸಂಖ್ಯೆ ಇಪಿ ಇಪಿ14 ಎಸ್ಇಎಸ್ 2022 ದಿನಾಂಕ 18.06.2022

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023-2024 ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ನೇರ ನೇಮಕಾತಿ ಮೂಲಕ ಹುದ್ದೆ ಭರ್ತಿ ಮಾಡುವವರೆಗೆ ಅಥವಾ ಪ್ರಸ್ತುತ ಶೈಕ್ಷಣಿಕ ಸಾಲಿನ ಅಂತ್ಯದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ ಖಾಲಿ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ **ಒಟ್ಟು-27000** ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ (ಸರ್ಕಾರವು ಈಗಾಗಲೇ ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಿರುವ ಒಟ್ಟು 15000 ಪದವೀಧರ ಪ್ರಾಥಮಿಕ ಶಿಕ್ಷಕರ (6 ರಿಂದ 8 ನೇ ತರಗತಿ) ಹುದ್ದೆಗಳ ಅಡಿಯಲ್ಲಿ ಪ್ರಸ್ತುತ ನೇಮಕಾತಿಯ ಎಲ್ಲಾ ಅಂತಿಮ ಪ್ರಕ್ರಿಯೆಗಳು ಮುಕ್ತಾಯಗೊಂಡು 2023-24 ನೇ ಸಾಲಿನಲ್ಲಿ ಹಾಜರಾಗುವ ಒಟ್ಟು ಶಿಕ್ಷಕರುಗಳ ಸಂಖ್ಯೆಗೆ ಅನುಗುಣವಾಗಿ ಕಡಿತಗೊಳಿಸುವ ಷರತ್ತಿಗೊಳಪಟ್ಟು ಅನುಮತಿ ನೀಡಲಾಗಿದೆ.

ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ವೃಂದ ಬಲ ನಿಗದಿಗೊಳಿಸಿರುವ ದಿನಾಂಕ 02.02.2018 ರ ಇಲಾಖಾ ಅಧಿಸೂಚನೆಯಲ್ಲಿನ ಸೂಚನೆಗಳನ್ನು ಹಾಗೂ 2022-23 ನೇ ಸಾಲಿನಲ್ಲಿ ಅಗತ್ಯತೆ/ಹೆಚ್ಚುವರಿ ಶಿಕ್ಷಕರ ಹುದ್ದೆಗಳ ಗುರ್ತಿಸುವಿಕೆ ಮತ್ತು ಮರು ಹೊಂದಾಣಿಕೆ ಪ್ರಕ್ರಿಯೆ ಸಂಬಂಧ ನೀಡಲಾಗಿರುವ ಹುದ್ದೆ ಹಂಚಿಕೆ ಅನುಬಂಧ-1 ಮತ್ತು ಅನುಬಂಧ-2 ಸೂಚನೆಗಳನ್ನು ಪಾಲಿಸಿ ಪ್ರತಿ ಶಾಲೆಗೆ ಅಗತ್ಯವಿರುವ ಶಿಕ್ಷಕರ ಹುದ್ದೆಗಳ ಕುರಿತಂತೆ, ಶಾಲಾವಾರು ವೃಂದ ಮಂಜೂರಾತಿ ಕ್ರಮಗಳನ್ನು ಈಗಾಗಲೇ ಜಿಲ್ಲಾ ಹಂತದಲ್ಲಿ ನಿಯಮಾನುಸಾರ ಕೈಗೊಳ್ಳಲಾಗಿರುತ್ತದೆ.

ಸದರಿ ಆಧಾರದಲ್ಲಿ, ಎಲ್ಲಿ ಅಗತ್ಯ ಖಾಲಿ ಹುದ್ದೆಗಳಿವೆಯೋ ಅಂತಹ ಖಾಲಿ ಹುದ್ದೆಗಳಿಗೆ ಎದುರಾಗಿ ಅತಿಥಿ ಶಿಕ್ಷಕರನ್ನು ಆಯ್ಕೆ ಮಾಡಿಕೊಳ್ಳಲು ಪ್ರಸ್ತುತ ಲಭ್ಯವಿರುವ ಖಾಲಿ ಹುದ್ದೆಗಳ ಮಾಹಿತಿಯಂತೆ ಅತಿಥಿ ಶಿಕ್ಷಕರ ಹುದ್ದೆಗಳನ್ನು ಜಿಲ್ಲಾ ಉಪನಿರ್ದೇಶಕರ ವಿಲೇವಾರಿಯಲ್ಲಿ ಹಂಚಿಕೆ ಮಾಡಲಾಗಿದೆ.

ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಿದೆ.

1. ಖಾಲಿ ಇರುವ ಅಗತ್ಯ ಹುದ್ದೆಗಳಿಗೆ ಮಾತ್ರ ಆದ್ಯತೆ ಮೇರೆಗೆ ಅತಿಥಿ ಶಿಕ್ಷಕರನ್ನು ತ್ವರಿತವಾಗಿ ನೇಮಕಾತಿ ಮಾಡಲು ಜಿಲ್ಲಾ ಉಪನಿರ್ದೇಶಕರು **ತಾಲ್ಲೂಕುವಾರು ಹುದ್ದೆಗಳ ಮರು ಹಂಚಿಕೆಯನ್ನು ದಿನಾಂಕ 26/05/2023 ರ ಒಳಗಾಗಿ ಕಡ್ಡಾಯವಾಗಿ ಮಾಡತಕ್ಕದು, ತಾಲ್ಲೂಕುವಾರು ಹುದ್ದೆಗಳ ಹಂಚಿಕೆ ಆದೇಶದ ಪ್ರತಿಯನ್ನು ಅಂದೇ ಈ ಕಛೇರಿಗೆ ಮಿಚಂಚೆ (ಇ-ಮೇಲ್) ಮೂಲಕ ಸಲ್ಲಿಸುವುದು.**
2. ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ ಅತಿಥಿ ಶಿಕ್ಷಕರ ಆಯ್ಕೆ ಜವಾಬ್ದಾರಿಯನ್ನು ಸಂಬಂಧಿಸಿದ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರುಗಳ ಮೂಲಕವೇ ಮಾಡುವುದು.

3. ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರನ್ನು ಪ್ರಮುಖವಾಗಿ ಆದ್ಯತೆ ಮೇರೆಗೆ ಗ್ರಾಮೀಣ ಪ್ರದೇಶಗಳಲ್ಲಿನ ಖಾಲಿ ಹುದ್ದೆಗಳಿಗೆ ಹಾಗೂ ಶಿಕ್ಷಕರ ರಹಿತ ಶಾಲೆಗಳಿಗೆ/ಹೆಚ್ಚು ವಿದ್ಯಾರ್ಥಿಗಳಿರುವ ಖಾಲಿ ಹುದ್ದೆಗಳಿಗೆ ಮೊದಲ ಆದ್ಯತೆ ನೀಡುವುದು.
4. ರಾಜ್ಯದಲ್ಲಿರುವ ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಗಳು/ ಬೆಂಗಳೂರು ಪಬ್ಲಿಕ್ ಶಾಲೆಗಳು ಹಾಗೂ ಆದರ್ಶ ವಿದ್ಯಾಲಯಗಳಲ್ಲಿ ಶೇಕಡ 100% ರಷ್ಟು ಅತಿಥಿ ಶಿಕ್ಷಕರನ್ನು ಆದ್ಯತೆ ಮೇರೆಗೆ ನೇಮಕಾತಿ ಮಾಡುವುದು.
5. ಅತಿಥಿ ಶಿಕ್ಷಕರನ್ನು ಆಯಾ ಹುದ್ದೆಗೆ ನಿಗದಿಪಡಿಸಿದ ಕನಿಷ್ಟ ವಿದ್ಯಾರ್ಹತೆಯನ್ನು ಪರಿಗಣಿಸಿ ಮೆರಿಟ್ ಆಧಾರದಲ್ಲಿ ಆಯ್ಕೆ ಮಾಡತಕ್ಕದ್ದು.
6. ಅತಿಥಿ ಶಿಕ್ಷಕರ ಹಾಜರಾತಿ ವಹಿಯನ್ನು ಪ್ರತ್ಯೇಕವಾಗಿ ನಿರ್ವಹಿಸುವುದು.
7. ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರ ಗೌರವ ಸಂಭಾವನೆ ದರ ಮಾಹೆಯಾನ ರೂ 10000/- ಆಗಿರುತ್ತದೆ.

ನೇಮಕಗೊಂಡ ತಾಲ್ಲೂಕುವಾರು ಅತಿಥಿ ಶಿಕ್ಷಕರ ಮಾಹಿತಿಯನ್ನು ಕ್ರೋಢೀಕರಿಸಿ ಜಿಲ್ಲೆಯಿಂದ ಅನುದಾನ ಬೇಡಿಕೆ/ವಿವರಗಳನ್ನು ಸಲ್ಲಿಸುವುದು. ತಾಲ್ಲೂಕುವಾರು ಬೇಡಿಕೆಯನ್ನಾಧರಿಸಿ ತಾಲ್ಲೂಕು ಪಂಚಾಯತ್‌ಗಳಿಗೆ ನೇರವಾಗಿ ಆರ್ಥಿಕ ಇಲಾಖೆಯಿಂದ ಬಿಡುಡೆಯಾಗುತ್ತದೆ.

ಮೇಲಿನ ಎಲ್ಲಾ ಷರತ್ತುಗಳನ್ನು ಚಾಚು ತಪ್ಪದೇ ಪಾಲಿಸಲು ಸಂಬಂಧಿಸಿದ ಉಪನಿರ್ದೇಶಕರು/ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಂಬಂಧಿತ ಪ್ರಾಥಮಿಕ ಶಾಲೆಗಳ ಮುಖ್ಯ ಶಿಕ್ಷಕರಿಗೆ ಕಡ್ಡಾಯವಾಗಿ ಸೂಚಿಸಲು ಈ ಮೂಲಕ ತಿಳಿಸಿದೆ.

ಮೇಲ್ಕಂಡ ವಿಷಯದಲ್ಲಿ ಯಾವುದೇ ಲೋಪದೋಷಗಳಾದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು. ಆಯ್ಕೆ ಮಾಡಿಕೊಂಡ ಅತಿಥಿ ಶಿಕ್ಷಕರ ಗೌರವ ಸಂಭಾವನೆ ಪಾವತಿಸಲು ತಾಲ್ಲೂಕು/ವಲಯವಾರು ವಿವರಗಳನ್ನು ಜಿಲ್ಲಾ ಉಪನಿರ್ದೇಶಕರು ಕ್ರೋಢೀಕರಿಸಿ, ತಾಲ್ಲೂಕುವಾರು ಅಗತ್ಯವಿರುವ ಅನುದಾನ ಬೇಡಿಕೆ ಸಹಿತ ದೃಢೀಕೃತ ವರದಿಯನ್ನು ದಿನಾಂಕ 10/06/2023 ರೊಳಗಾಗಿ ಕೆಳಗಿನ ನಮೂನೆಯಲ್ಲಿ ಇ-ಮೇಲ್ primarydpi@gmail.com ಮುಖಾಂತರ ಈ ಕಛೇರಿಗೆ ಸಲ್ಲಿಸುವುದು.

ಜಿಲ್ಲೆಯ ಹೆಸರು :          ಜಿಲ್ಲೆಗೆ ಹಂಚಿಕೆ ಮಾಡಿರುವ ಒಟ್ಟು ಅತಿಥಿ ಶಿಕ್ಷಕರ ಸಂಖ್ಯೆ :

| ಕ್ರಮ ಸಂಖ್ಯೆ | ತಾಲ್ಲೂಕಿನ ಹೆಸರು/ತಾಲ್ಲೂಕು ಪಂಚಾಯ್ತಿ ಹೆಸರು | ಹಂಚಿಕೆ ಮಾಡಲಾದ ಅತಿಥಿ ಶಿಕ್ಷಕರ ಸಂಖ್ಯೆ | ನೇಮಕಗೊಂಡ ಅತಿಥಿ ಶಿಕ್ಷಕರ ಸಂಖ್ಯೆ | ಅಗತ್ಯವಿರುವ ಅನುದಾನ ವಿವರ |
|---|---|---|---|---|
| | | | | |

20.05.2023
ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ಗೆ,
1. **ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ (ಆಡಳಿತ),**
2. **ರಾಜ್ಯದ ಎಲ್ಲಾ ಜಿಲ್ಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಜಿಲ್ಲಾ ಉಪನಿರ್ದೇಶಕ ಮೂಲಕ)**

**ಪ್ರತಿಯನ್ನು:-**
1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಅಪರ ಆಯುಕ್ತರು, ಗುಲ್ಬರ್ಗಾ/ ಧಾರವಾಡ, ಶಾಲಾ ಶಿಕ್ಷಣ ಇಲಾಖೆ, ಇವರ ಮಾಹಿತಿ ಹಾಗು ಅಗತ್ಯ ಕ್ರಮಕ್ಕಾಗಿ.
4. ಆಯುಕ್ತರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ
5. ಹಿರಿಯ ಸಹಾಯಕ ನಿರ್ದೇಶಕರು (ಇ-ಆಡಳಿತ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು
6. ಕಛೇರಿ ಪ್ರತಿ.

2023–24 ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲು ಹಂಚಿಕೆ ಮಾಡಲಾದ ಜಿಲ್ಲಾವಾರು ಹುದ್ದೆಗಳು

| DISTRICT | ಹಂಚಿಕೆ ಮಾಡಲಾದ ಹುದ್ದೆಗಳು |
|---|---|
| BELGAUM | 1046 |
| BAGALKOT | 1130 |
| VIJAYAPURA | 1115 |
| KALBURGI | 1706 |
| BIDAR | 681 |
| RAICHUR | 1540 |
| KOPPAL | 1035 |
| GADAG | 471 |
| DHARWAD | 540 |
| UTTARA KANNADA | 250 |
| HAVERI | 617 |
| BELLARY | 540 |
| CHITRADURGA | 571 |
| DAVANAGERE | 979 |
| SHIMOGA | 731 |
| UDUPI | 312 |
| CHIKKAMANGALORE | 430 |
| TUMKUR | 585 |
| KOLAR | 499 |
| BANGALORE U SOUTH | 573 |
| BANGALORE RURAL | 367 |
| MANDYA | 827 |
| HASSAN | 712 |
| DAKSHINA KANNADA | 828 |
| KODAGU | 259 |
| MYSORE | 1090 |
| CHAMARAJANAGARA | 409 |
| BANGALORE U NORTH | 186 |
| CHIKKABALLAPURA | 551 |
| BELGAUM CHIKKODI | 1673 |
| TUMKUR MADHUGIRI | 553 |
| RAMANAGARA | 561 |
| YADAGIRI | 1364 |
| UTTARA KANNADA SIRSI | 584 |
| VIJAYANAGARA | 1685 |
| **TOTAL** | **27000** |

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ಕರ್ನಾಟಕ ಸರ್ಕಾರ

**ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಕೆ.ಆರ್.ವೃತ್ತ ಬೆಂಗಳೂರು-01**

ಸಂಖ್ಯೆ:ಸಿ4(1)ಸ.ಪ್ರೌ.ಶಾ.ಅ.ಶಿ.ನೇ-01/2023-24 ದಿನಾಂಕ:25.05.2023

**"ಅತೀ ತುರ್ತು"**

**ಜ್ಞಾಪನ**

**ವಿಷಯ:** 2023-24ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿನ ಖಾಲಿ ಇರುವ ವಿಷಯ ಶಿಕ್ಷಕರ ಹುದ್ದೆಗಳಿಗೆದುರಾಗಿ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಕುರಿತು.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ:ಇಪಿ.166.ಎಸ್ಇಎಸ್.2023, ದಿನಾಂಕ: 25..05.2023.

2. ಸರ್ಕಾರದ ಆದೇಶ ಸಂಖ್ಯೆ:ಆಇ 323 ವೆಚ್ಚ-8/2022 ದಿನಾಂಕ: 23.05.2023.

3. ಸರ್ಕಾರದ ಆದೇಶ ಸಂಖ್ಯೆ ಇಪಿ 14 ಎಸ್ ಇ ಎಸ್ 2022, ದಿನಾಂಕ: 27/04/2022.

4) ಸರ್ಕಾರದ ಆದೇಶ ಸಂಖ್ಯೆ ಇಪಿ 14 ಎಸ್ ಇ ಎಸ್ 2022, ದಿನಾಂಕ:18/06/2022.

* * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖ (1) ರನ್ವಯ 2023-24ನೇ ಸಾಲಿನ ಸರ್ಕಾರಿ ಪ್ರೌಢಶಾಲೆಗಳಲ್ಲಿನ ಖಾಲಿ ಇರುವ ವಿಷಯ ಶಿಕ್ಷಕರ ಹುದ್ದೆಗಳಿಗೆದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ನೇರ ನೇಮಕಾತಿ/ಬಡ್ತಿ/ವರ್ಗಾವಣೆ ಮೂಲಕ ಭರ್ತಿ ಮಾಡುವವರೆಗೆ ಅಥವಾ ಪ್ರಸಕ್ತ ಶೈಕ್ಷಣಿಕ ಸಾಲಿನ ಅಂತ್ಯದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಒಟ್ಟು 6000 ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಗೌರವಧನದ ಆಧಾರದ ಮೇಲೆ ಶಾಲಾ ಪ್ರಾರಂಭದ ದಿನಾಂಕದಿಂದಲೇ ನೇಮಕ ಮಾಡಿಕೊಳ್ಳಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಲಾಗಿದೆ.

**ಷರತ್ತುಗಳು:-**

1. ಸರ್ಕಾರಿ ಪ್ರೌಢ ಶಾಲೆಗಳಿಗೆ ಶಾಲಾವಾರು/ತಾಲ್ಲೂಕುವಾರು ಖಾಲಿ ಇರುವ ಅಗತ್ಯ ಹುದ್ದೆಗಳಿಗೆ ಮಾತ್ರ ಅತಿಥಿ ಶಿಕ್ಷಕರನ್ನು ತ್ವರಿತವಾಗಿ ನೇಮಕಾತಿ ಮಾಡಲು ಆದ್ಯತೆ ಮೇರೆಗೆ ಅಗತ್ಯ ಕ್ರಮ ವಹಿಸುವುದು.
2. ಅತಿಥಿ ಶಿಕ್ಷಕರ ಆಯ್ಕೆ ಜವಾಬ್ದಾರಿಯನ್ನು ಸಂಬಂಧಿಸಿದ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರುಗಳ ಮೂಲಕವೇ ನೇಮಕ ಮಾಡುವುದು.
3. ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಗಳು/ಬೆಂಗಳೂರು ಪಬ್ಲಿಕ್ ಶಾಲೆಗಳು ಹಾಗೂ ಆದರ್ಶ ವಿಧ್ಯಾಲಯಗಳಲ್ಲಿ ಖಾಲಿ ಇರುವ ಸಹ ಶಿಕ್ಷಕರ ಹುದ್ದೆಗಳ ಶೇಕಡ 100 ರಷ್ಟು ಅತಿಥಿ ಶಿಕ್ಷಕರನ್ನು ಮೊದಲ ಆದ್ಯತೆ ನೀಡಿ ನೇಮಕ ಮಾಡಿಕೊಳ್ಳಲು ಕ್ರಮವಹಿಸುವುದು.
4. ಸರ್ಕಾರಿ ಪ್ರೌಢ ಶಾಲಾ ಅತಿಥಿ ಶಿಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ - ಕಠಿಣ ವಿಷಯಗಳಾದ ಗಣಿತ, ವಿಜ್ಞಾನ, ಆಂಗ್ಲ ವಿಷಯದ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಆದ್ಯತೆ ನೀಡಲು ತಿಳಿಸಿದೆ. ನಂತರ ಇತರೆ ವಿಷಯಗಳಿಗೆ ಆದ್ಯತೆ ನೀಡುವುದು.
5. ಸದರಿ ವಿಷಯಗಳಿಗೆ ಹೆಚ್ಚುವರಿ ಶಿಕ್ಷಕರು ಇರುವ ಶಾಲೆಗಳಿಗೆ ಅತಿಥಿ ಶಿಕ್ಷಕರ ಹುದ್ದೆಗಳನ್ನು ಮಂಜೂರು ಮಾಡುವಂತಿಲ್ಲ.
6. ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡ ಹುದ್ದೆಗೆ ವರ್ಗಾವಣೆ/ನೇಮಕಾತಿ ಮುಖಾಂತರ ಖಾಯಂ ಶಿಕ್ಷಕರು ಸ್ಥಳನಿಯುಕ್ತಿಗೊಂಡಲ್ಲಿ ಸದರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅತಿಥಿ ಶಿಕ್ಷಕರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿ. ತಾಲ್ಲೂಕಿನಲ್ಲಿ ವರ್ಗಾವಣೆಯಿಂದ ತೆರವಾದ ಹುದ್ದೆಗೆ ಅತಿಥಿ ಶಿಕ್ಷಕರನ್ನು ಹಂಚಿಕೆ ಮಾಡುವುದು.
7. ಅತಿಥಿ ಶಿಕ್ಷಕರನ್ನು ಅತೀ ಹೆಚ್ಚು ಮಕ್ಕಳಿರುವ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಶಿಕ್ಷಕರ ಹುದ್ದೆಗಳು ಖಾಲಿ ಇರುವ ಪ್ರೌಢ ಶಾಲೆಗಳಿಗೆ ಆದ್ಯತೆ ಮೇರೆಗೆ ಒದಗಿಸುವುದು.
8. ಅತಿಥಿ ಶಿಕ್ಷಕರನ್ನು ಪ್ರಮುಖವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಅತ್ಯಾವಶ್ಯಕ ಖಾಲಿ ಹುದ್ದೆಗಳಿಗೆ ಆದ್ಯತೆ ಮೇರೆಗೆ ನೇಮಿಸುವುದು.
9. ಅತಿಥಿ ಶಿಕ್ಷಕರನ್ನು ಆಯಾ ಹುದ್ದೆಗೆ ನಿಗಧಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಪರಿಗಣಿಸಿ ಮೆರಿಟ್ ಆಧಾರದಲ್ಲಿ ಆಯ್ಕೆ ಮಾಡತಕ್ಕದ್ದು.
10. ಅತಿಥಿ ಶಿಕ್ಷಕರ ಹಾಜರಾತಿ ವಹಿಯನ್ನು ಪ್ರತ್ಯೇಕವಾಗಿ ನಿರ್ವಹಿಸುವುದು.
11. ಸರ್ಕಾರಿ ಪ್ರೌಢ ಶಾಲಾ ಅತಿಥಿ ಶಿಕ್ಷಕರ ಗೌರವ ಸಂಭಾವನೆ ದರ ಮಾಹೆಯಾನ ರೂ.10500/- ಆಗಿರುತ್ತದೆ. ಈ ಗೌರವ ಧನ ಪಾವತಿಯನ್ನು ಅತಿಥಿ ಶಿಕ್ಷಕರು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಪಾವತಿಸುವುದು.
12. ತಾಲ್ಲೂಕುವಾರು ಅತಿಥಿ ಶಿಕ್ಷಕರ ಹಂಚಿಕೆ ಮಾಡಿ ಅನುದಾನದ ವಿವರ ಈ ಕಛೇರಿಗೆ ಸಲ್ಲಿಸಿದ ನಂತರ ತಾಲ್ಲೂಕಿನಿಂದ ತಾಲ್ಲೂಕಿಗೆ ಅತಿಥಿ ಶಿಕ್ಷಕರ ಮರುಹಂಚಿಕೆ ಮಾಡುವಂತಿಲ್ಲ.

ಈ ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ, ಇಲಾಖೆಯ ನಿಯಮಗಳು ಹಾಗೂ ಸುತ್ತೋಲೆಗಳ ಮಾರ್ಗದರ್ಶನದಡಿ ಒಟ್ಟು 6000 ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಸರ್ಕಾರದ ಸಹಮತಿಯಂತೆ ಉಲ್ಲೇಖ (3) ರ ಪತ್ರದಲ್ಲಿ ವಿಧಿಸಿರುವ ಷರತ್ತುಗಳನ್ನೊಳಗೊಂಡಂತೆ ಜಿಲ್ಲೆಗಳಿಗೆ ಅತಿಥಿ ಶಿಕ್ಷಕರನ್ನು ಹಂಚಿಕೆ ಮಾಡಿ ಅನುಮತಿ ನೀಡಲಾಗಿರುತ್ತದೆ.

ಮೇಲ್ಕಂಡ ವಿಷಯದಲ್ಲಿ ಯಾವುದೇ ಲೋಪದೋಷಗಳಾಗದಂತೆ ಕ್ರಮವಹಿಸಲು ತಿಳಿಸಿದೆ, ತಪ್ಪಿದಲ್ಲಿ ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು. ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು **ತಾಲ್ಲೂಕು ಪಂಚಾಯಿತಿವಾರು** ಹುದ್ದೆಗಳ ವಿವರಗಳನ್ನು ಕೆಳಗಿನ ನಮೂನೆಯಲ್ಲಿ ಕ್ರೋಢೀಕೃತ, ದೃಢೀಕೃತ (ಪಿ.ಡಿ.ಎಫ್ ಮಾದರಿಯಲ್ಲಿ) ಸ್ಕ್ಯಾನ್ಡ್ ಪ್ರತಿಯನ್ನು ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ ಇ-ಮೇಲ್ ವಿಳಾಸ est4cpibng@gmail.com ಮುಖಾಂತರ ದಿ.15.06.2023ರೊಳಗೆ ಈ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸುವುದು. ಇದನ್ನು ಆದ್ಯತೆ ಮೇರೆಗೆ ಪರಿಗಣಿಸಿ ವಿಳಂಭಕ್ಕೆ ಅವಕಾಶ ನೀಡದಂತೆ ತುರ್ತು ಕ್ರಮ ಜರುಗಿಸಲು ತಿಳಿಸಿದೆ. ತಪ್ಪಿದ್ದಲ್ಲಿ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

**ಷರಾ:-**

ಜಿಲ್ಲೆಗಳಿಗೆ ಹಂಚಿಕೆ ಮಾಡಿರುವ ಅತಿಥಿ ಶಿಕ್ಷಕರ ವಿವರ ಅನುಬಂಧ-1 ಈ ಪತ್ರದೊಂದಿಗೆ ಲಗತ್ತಿಸಿದೆ.

**ನಮೂನೆ-1**

**(ಪ್ರೌಢ ಶಾಲಾ ಅತಿಥಿ ಶಿಕ್ಷಕರ ನೇಮಕಾತಿ ವಿವರ)**

**ಜಿಲ್ಲೆಯ ಹೆಸರು :** **ಜಿಲ್ಲೆಗೆ ಹಂಚಿಕೆ ಮಾಡಿರುವ ಒಟ್ಟು ಅತಿಥಿ ಶಿಕ್ಷಕರ ಸಂಖ್ಯೆ :**

| ಕ್ರಮ ಸಂಖ್ಯೆ | ತಾಲ್ಲೂಕಿನ ಹೆಸರು | ತಾಲ್ಲೂಕು ಪಂಚಾಯಿತಿ ಹೆಸರು | ಹಂಚಿಕೆ ಮಾಡಲಾದ ಅತಿಥಿ ಶಿಕ್ಷಕರ ಸಂಖ್ಯೆ | ನೇಮಕಗೊಂಡ ಅತಿಥಿ ಶಿಕ್ಷಕರ ಸಂಖ್ಯೆ | ನೇಮಕಗೊಂಡ ಅತಿಥಿ ಶಿಕ್ಷಕರಿಗೆ ಗೌರವ ಸಂಭಾವನೆ ಪಾವತಿಸಲು ಅನುದಾನ ಬೇಡಿಕೆ ವಿವರ (ನೇಮಕಾತಿ ದಿನಾಂಕದಿಂದ ಮಾರ್ಚ್-24 ರವರೆಗೆ, ಪ್ರತಿ ಶಿಕ್ಷಕರಿಗೆ/ ಒಂದು ತಿಂಗಳಿಗೆ ರೂ.10500/-ರಂತೆ, ಗರಿಷ್ಠ 10 ತಿಂಗಳು ಮಾತ್ರ) |
|---|---|---|---|---|---|

20.10.6)-10
**ಆಯುಕ್ತರು**
**ಶಾಲಾ ಶಿಕ್ಷಣ ಇಲಾಖೆ**

ಗೆ,

ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ (ಆಡಳಿತ) ಇ ಮೇಲ್ ಮೂಲಕ ಅಗತ್ಯ ಹಾಗೂ ತುರ್ತು ಕ್ರಮಕ್ಕಾಗಿ.

**ಪ್ರತಿಯನ್ನು:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಅಪರ ಆಯುಕ್ತರು, ಗುಲ್ಬರ್ಗಾ / ಧಾರವಾಡ, ಶಾಲಾ ಶಿಕ್ಷಣ ಇಲಾಖೆ ರವರ ಮಾಹಿತಿ ಹಾಗೂ ಕ್ರಮಕ್ಕಾಗಿ.
4. ಹಿರಿಯ ಸಹಾಯಕ ನಿರ್ದೇಶಕರು (ಇ-ಆಡಳಿತ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು.
5. ಕಛೇರಿ ಪ್ರತಿ.

# ಅನುಬಂಧ

ರಾಜ್ಯದಲ್ಲಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಪ್ರಸ್ತುತ ಖಾಲಿಯಿರುವ ಬೋಧಕ ವೃಂದದ ಸಹ ಶಿಕ್ಷಕರ ಹುದ್ದೆಗಳ ಸಂಖ್ಯೆ: 9257. ಈ ಹುದ್ದೆಗಳಿಗೆ ಎದುರಾಗಿ ಒಟ್ಟು 6000 ಅತಿಥಿ ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮಾಡಲು ಸರ್ಕಾರವು ಅನುಮೋದನೆ ನೀಡಿರುತ್ತದೆ. ಅಂದರೆ ಖಾಲಿ ಹುದ್ದೆಗಳ ಒಟ್ಟು ಸಂಖ್ಯೆಯ ಶೇ. 65 ರಷ್ಟು ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಅನುಮತಿ ನೀಡಿರುತ್ತಾರೆ. ಆಯಾ ಜಿಲ್ಲೆಯಲ್ಲಿ ಖಾಲಿ ಇರುವ ಬೋಧಕ ವೃಂದದ ಸಹ ಶಿಕ್ಷಕರ ಹುದ್ದೆಗಳ ಒಟ್ಟು ಸಂಖ್ಯೆಯ ಶೇಕಡ 65 ರಂತೆ ಜಿಲ್ಲಾವಾರು ಹಂಚಿಕೆಯನ್ನು ಮಾಡಲಾಗಿದೆ.

| Sl No | District Name | Assisant Teacher (vacancies) | Guest Teacher Alloted |
|---|---|---|---|
| 1 | BAGALKOT(2902) | 323 | 210 |
| 2 | BALLARI(2912) | 391 | 253 |
| 3 | BELAGAVI CHIKKODI(2930) | 538 | 350 |
| 4 | BELAGAVI(2901) | 326 | 211 |
| 5 | BENGALURU RURAL(2921) | 131 | 85 |
| 6 | BENGALURU U NORTH(2928) | 100 | 65 |
| 7 | BENGALURU U SOUTH(2920) | 223 | 145 |
| 8 | BIDAR(2905) | 295 | 191 |
| 9 | CHAMARAJANAGARA(2927) | 148 | 96 |
| 10 | CHIKKABALLAPURA(2929) | 192 | 125 |
| 11 | CHIKKAMANGALURU(2917) | 172 | 111 |
| 12 | CHITRADURGA(2913) | 138 | 90 |
| 13 | DAKSHINA KANNADA(2924) | 271 | 176 |
| 14 | DAVANAGERE(2914) | 124 | 80 |
| 15 | DHARWAD(2909) | 204 | 132 |
| 16 | GADAG(2908) | 203 | 132 |
| 17 | HASSAN(2923) | 361 | 234 |
| 18 | HAVERI(2911) | 235 | 152 |
| 19 | KALBURGI(2904) | 414 | 268 |
| 20 | KODAGU(2925) | 79 | 51 |
| 21 | KOLAR(2919) | 276 | 179 |
| 22 | KOPPAL(2907) | 460 | 298 |
| 23 | MANDYA(2922) | 338 | 219 |
| 24 | MYSURU(2926) | 358 | 232 |
| 25 | RAICHUR(2906) | 665 | 431 |
| 26 | RAMANAGARA(2932) | 158 | 102 |
| 27 | SHIVAMOGGA(2915) | 218 | 141 |
| 28 | TUMAKURU MADHUGIRI(2931) | 170 | 110 |
| 29 | TUMAKURU(2918) | 219 | 141 |
| 30 | UDUPI(2916) | 175 | 113 |
| 31 | UTTARA KANNADA SIRSI(2934) | 132 | 86 |
| 32 | UTTARA KANNADA(2910) | 50 | 32 |
| 33 | VIJAYANAGARA(2935) | 292 | 189 |
| 34 | VIJAYAPURA(2903) | 318 | 206 |
| 35 | YADAGIRI(2933) | 560 | 364 |
| | Grand Total | 9257 | 6000 |

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ